# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:25:ಗ್ರಾವಿಯೋ:2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 08.09.2016

## ಸುತ್ತೋಲೆ

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ಮಾನ್ಯ ಶಾಸಕರ ಅಧ್ಯಕ್ಷತೆಯ ಯೋಜನಾ ಉಸ್ತುವಾರಿ ಸಮಿತಿಗೆ ಶಿಫಾರಸ್ಸು ಮಾಡಲಾದ ಅಧಿಕಾರಗಳ ಕುರಿತಂತೆ.

ಉಲ್ಲೇಖ: 1. ಗ್ರಾಮ ವಿಕಾಸ ಯೋಜನೆಯ ಪ್ರಗತಿ ಕುರಿತಂತೆ ಅಂದಾಜು ಸಮಿತಿ ಸಭೆ ದಿ:24.08.2016ರ ಶಿಫಾರಸ್ಸುಗಳು.
2. ಗ್ರಾಮ ವಿಕಾಸ ಯೋಜನೆ ಮಾರ್ಗಸೂಚಿ.

***

ಕರ್ನಾಟಕ ವಿಧಾನ ಮಂಡಲದ ನಡೆದ ಅಂದಾಜು ಸಮಿತಿಯು ದಿನಾಂಕ:24.08.2016ರಂದು ನಡೆಸಿದ ಸಭೆಯಲ್ಲಿ ಗ್ರಾಮ ವಿಕಾಸ ಯೋಜನೆಯ ಪ್ರಗತಿಯನ್ನು ಪರಿಶೀಲಿಸಿ, ಯೋಜನೆಯ ಪರಿಣಾಮಕಾರಿ ಹಾಗೂ ನಿಗಧಿತ ಸಮಯದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಆಯ್ಕೆಯಾದ ಗ್ರಾಮಗಳಲ್ಲಿ ಅಭಿವೃದ್ಧಿಪಡಿಸಿ ಯೋಜನೆಯ ಫಲಶೃತಿ ಆ ಗ್ರಾಮದ ಜನರಿಗೆ ದೊರಕುವಂತೆ ಮಾಡಲು ಯೋಜನೆಯನ್ನು ಯಶಸ್ಸಿಗೊಳಿಸುವ ಹಿನ್ನಲೆಯಲ್ಲಿ ಹಾಗೂ ಗ್ರಾಮ ಪಂಚಾಯಿತಿಗಳು ಇನ್ನಷ್ಟು ಪರಿಣಾಮಕಾರಿಯಾಗಿ ಜನರಿಗೆ ಉತ್ತರದಾಯಿಯಾಗುವಂತೆ ಜವಾಬ್ದಾರಿಯುತವಾಗಿ ಮತ್ತು ಕಾಲಬದ್ಧವಾಗಿ ಕೆಲಸ ಕಾರ್ಯನಿರ್ವಹಿಸುವಂತೆ ಮಾಡಲು ಸಲಹೆ ನೀಡಿರುತ್ತದೆ. ಇದೇ ಅಭಿಪ್ರಾಯವನ್ನು ಹಾಗೂ ಸಲಹೆಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರುಗಳ ಸಹ ಹಲವಾರು ಸಂದರ್ಭದಲ್ಲಿ ನೀಡಿರುತ್ತಾರೆ. ಈ ಹಿನ್ನಲೆಯಲ್ಲಿ ಗ್ರಾಮ ವಿಕಾಸ ಯೋಜನೆಯನ್ನು ನಿಗಧಿತ ಅವಧಿಯಲ್ಲಿ ಅನುಷ್ಠಾನ ಮಾಡುವ ಆಶಯದಿಂದ ಗ್ರಾಮ ವಿಕಾಸ ಮಾರ್ಗಸೂಚಿಯಲ್ಲಿ ಅವಕಾಶ ಕಲ್ಪಿಸಿರುವ ಶಾಸಕರ ಅಧ್ಯಕ್ಷತೆ ಉಸ್ತುವಾರಿ ಸಮಿತಿಗೆ ಈ ಕೆಳಕಂಡ ನಿರ್ಧಾರಗಳನ್ನು ಕೈಗೊಳ್ಳುವ ಬಗ್ಗೆ ಅವಕಾಶ ಕಲ್ಪಿಸಿದೆ.

1. ಗ್ರಾಮ ವಿಕಾಸ ಯೋಜನೆಯ ಮಾರ್ಗಸೂಚಿಯಲ್ಲಿ ನಿಗಧಿಪಡಿಸಿರುವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಗ್ರಾಮದ ಹಿತದೃಷ್ಟಿಯಿಂದ ಮಾರ್ಗಸೂಚಿಯಲ್ಲಿರುವ ಇನ್ನೊಂದು ಅಭಿವೃದ್ಧಿ ಕಾಮಗಾರಿಗೆ ಬದಲಾವಣೆ ಮಾಡಬೇಕಾದ ಸಂದರ್ಭದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿರುವ ಯೋಜನಾ ಉಸ್ತುವಾರಿ ಸಮಿತಿಗೆ ಅನುಮೋದನೆ ನೀಡುವ ಅಧಿಕಾರ ನೀಡಲಾಗಿದೆ.

2. ಗ್ರಾಮ ಪಂಚಾಯಿತಿಗಳು ಗ್ರಾಮ ವಿಕಾಸ ಯೋಜನೆಯ ಕ್ರಿಯಾ ಯೋಜನೆಗಳನ್ನು ಅನುಮೋದನೆ ನೀಡುವಾಗ ಮತ್ತು ಅನುಷ್ಠಾನ ಸಂಸ್ಥೆಗಳನ್ನು ಆಯ್ಕೆ ಮಾಡುವಾಗ ವಿಳಂಭವಾಗುವ ಸಂದರ್ಭದಲ್ಲಿ ಕ್ರಿಯಾ ಯೋಜನೆಯನ್ನು ಅನುಮೋದಿಸಲು ಮತ್ತು ಅನುಷ್ಠಾನ ಸಂಸ್ಥೆಗಳನ್ನು ಆಯ್ಕೆ ಮಾಡಲು ಶಾಸಕರ ಅಧ್ಯಕ್ಷತೆಯಲ್ಲಿರುವ ಯೋಜನಾ ಉಸ್ತುವಾರಿ ಸಮಿತಿಗೆ ಅಧಿಕಾರ ನೀಡಲಾಗಿದೆ.

3. ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಯೋಜನೆಯ ಅನುದಾನವನ್ನು ಬಿಡುಗಡೆಗೊಳಿಸಲು ವಿಳಂಭಮಾಡಿದಂತಹ ಸಂದರ್ಭದಲ್ಲಿ ಸದರಿ ಪ್ರಕರಣಗಳನ್ನು ಶಾಸಕರ ಅಧ್ಯಕ್ಷತೆಯ ಯೋಜನಾ ಉಸ್ತುವಾರಿ ಸಮಿತಿಯು ಗ್ರಾಮ ಪಂಚಾಯಿತಿಯ ಅಧ್ಯಕ್ಷರಿಗೆ ಹಣ ಪಾವತಿ ಮಾಡಲು ಗರಿಷ್ಠ 7 ದಿನಗಳ ಒಳಗೆ ದಿನಾಂಕವನ್ನು ಗೊತ್ತುಪಡಿಸಲು ಹಾಗೂ

4. ಶಾಸಕರ ಅಧ್ಯಕ್ಷತೆಯ ಯೋಜನಾ ಉಸ್ತುವಾರಿ ಸಮಿತಿಯು ಶಿಫಾರಸ್ಸಿನಂತೆ ನಿಗದಿಪಡಿಸಿದ 7 ದಿನಗಳಳೊಗೆ ಹಣ ಪಾವತಿ ಮಾಡಲು ಗ್ರಾಮ ಪಂಚಾಯತಿಯ ಅಧ್ಯಕ್ಷರು ವಿಳಂಭ ಮಾಡಿದ್ದಲ್ಲಿ ಅಂತಹ ಪಂಚಾಯಿತಿಗೆ ಸಂಬಂಧಿಸಿದಂತೆ ಗ್ರಾಮ ವಿಕಾಸ ಯೋಜನೆಯ ಅನುದಾನವನ್ನು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜಂಟಿಯಾಗಿ ಸಹಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

8/9/16

**(ಬೂವನಹಳ್ಳಿನಾಗರಾಜ್)**
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಯನ್ನು ಕ್ರಮಕ್ಕಾಗಿ.**

1. ರಾಜ್ಯದ ಎಲ್ಲಾ ಮಾನ್ಯ ವಿಧಾನಸಭಾ ಸದಸ್ಯರುಗಳಿಗೆ.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಮುಖ್ಯ ಇಂಜಿನಿಯರ್, ಪಂ ರಾಜ್ ಇಂಜಿನಿಯರಿಂಗ್ ವಿಭಾಗ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
5. ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು (ಸಂಬಂಧಪಟ್ಟ ಗ್ರಾಮ ಪಂಚಾಯಿತಿಯ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿಯ ಅಧಿಕಾರಿಗಳು / ಕಾರ್ಯದರ್ಶಿ ಗೆ ಪ್ರತಿಯನ್ನು ಮಾಹಿತಿಗೆ ತಲುಪಿಸುವುದು)
6. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.
7. ಮುಖ್ಯಸ್ಥರು, ಗಣಕ ಕೋಶ, ಗ್ರಾ ಮತ್ತು ಪಂ.ರಾಜ್ ಇಲಾಖೆ. ಇವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು.

**ಪ್ರತಿಯನ್ನು ಮಾಹಿತಿಗಾಗಿ.**

1. ಮಹಾಲೇಖಪಾಲರು (ಆಡಿಟ್-I & II), ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗಳ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.& ಪಂ.ರಾಜ್ ಇಲಾಖೆ.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ ಮತ್ತು ಪಂ ರಾಜ್ ಇಲಾಖೆ.
5. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿ.